166(342) ಶ್ರೀ ರಾಜೇಂದ್ರವರ್ಮಾ (ಹುಲಸೂರು): ಮಾನ್ಯ ಸಣ್ಣ ಕೈಗಾರಿಕೆ ಮತ್ತು ರೇಷ್ಮೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಕಳೆದ 3 ವರ್ಷಗಳ ಅವಧಿಯಲ್ಲಿ ಸಣ್ಣ ಕೈಗಾರಿಕೆಗಳಿಗೆ ನೀಡಲಾದ ಸಬ್ಸಿಡಿಯ ಮೊತ್ತವೆಷ್ಟು;

ಆ) ಜಿಲ್ಲೆಯಲ್ಲಿ ಇನ್ನೂ ಎಷ್ಟು ಸಣ್ಣ ಕೈಗಾರಿಕೆಗಳಿಗೆ ಎಷ್ಟು ಪ್ರಮಾಣದ ಸಬ್ಸಿಡಿಯನ್ನು ನೀಡಬೇಕಾಗಿದೆ;

ಇ) ಜಿಲ್ಲೆಯಲ್ಲಿ ಕೈಗಾರಿಕೋದ್ಯಮಿಗಳು ತೀವ್ರವಾದ ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿರುವುದರಿಂದ ಬಾಕಿ ಇರುವ ಸಬ್ಸಿಡಿ ಹಣವನ್ನು ಪ್ರಸಕ್ತ ಸಾಲಿನಲ್ಲಿ ವಿತರಣೆ ಮಾಡಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳುವುದು?

ಶ್ರೀ ಕಟ್ಟಾಸುಬ್ರಮಣ್ಯ ನಾಯ್ಡು (ಸಣ್ಣ ಕೈಗಾರಿಕೆ ಮತ್ತು ರೇಷ್ಮೆ ಸಚಿವರು):

ಅ) ಕಳೆದ 3 ವರ್ಷಗಳ ಅವಧಿಯಲ್ಲಿ (203–04 ರಿಂದ ಡಿಸೆಂಬರ್ 2005ರ ಅಂತ್ಯಕ್ಕೆ) ಬೀದರ್ ಜಿಲ್ಲೆಯ 201 ಸಣ್ಣ ಕೈಗಾರಿಕೆಗಳಿಗೆ ಬಿಡುಗಡೆ ಮಾಡಲಾದ ಸಹಾಯಧನದ ಮೊತ್ತ ರೂ.78.58 ಲಕ್ಷಗಳು.

ಆ) ಜಿಲ್ಲೆಯಲ್ಲಿ ಇನ್ನೂ 573 ಸಣ್ಣ ಕೈಗಾರಿಕೆಗಳಿಗೆ ಒಟ್ಟು ರೂ.514.00 ಲಕ್ಷಗಳ ಸಹಾಯಧನವನ್ನು ನೀಡಬೇಕಾಗಿರುತ್ತದೆ. (30.6.2005)

ಇ) ಪ್ರಸಕ್ತ ಸಾಲಿನಲ್ಲಿ ರೂ.45.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ. ಬಾಕಿ ಸಹಾಯಧನವನ್ನು 2005–06 ಮತ್ತು 2006–07ನೇ ಸಾಲಿನಲ್ಲಿ ಅನುದಾನ ಲಭ್ಯತೆ ಆಧರಿಸಿ ಬಿಡುಗಡೆ ಮಾಡಲಾಗುವುದು.

167(343) ಶ್ರೀ ರಾಜೇಂದ್ರ ವರ್ಮಾ (ಹುಲಸೂರು): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆನೇಕಲ್ ಪ್ರಾದೇಶಿಕ ಅರಣ್ಯ ವಲಯದ ವ್ಯಾಪ್ತಿಯಲ್ಲಿ ಬರುವ ಅತ್ತಿಬೆಲೆ ಅರಣ್ಯ ತನಿಖಾ ಠಾಣೆಯಲ್ಲಿ ಇರುವ ವನಪಾಲಕರ ಹುದ್ದೆಗಳ ಸಂಖ್ಯೆ ಎಷ್ಟು;

ಆ) ಸದರಿ ತನಿಖಾ ಠಾಣೆಯಲ್ಲಿ ಎಲ್ಲ ವನಪಾಲಕ ಹುದ್ದೆಗಳು ಖಾಲಿ ಇದ್ದರೂ ಸಹ ಇಲ್ಲಿಗೆ ಖಾಯಂ ಸಿಬ್ಬಂದಿಯನ್ನು ವರ್ಗಾವಣೆ ಮಾಡದೇ ಹಲವಾರು ಗಂಭೀರವಾದ ಆರೋಪಗಳನ್ನು ಹೊತ್ತಿರುವ ಹಾಗೂ ಇಲಾಖಾ ವಿಚಾರಣೆ ಎದುರಿಸುತ್ತಿರುವ ಸಿಬ್ಬಂದಿ ವರ್ಗದವರನ್ನು ನಿಯೋಜನೆ ಮೇಲೆ ನೇಮಕಾತಿ ಮಾಡಿರುವುದು ನಿಜವೇ;

ಇ) ಹಾಗಿದ್ದಲ್ಲಿ, ಸರ್ಕಾರವು ಹೊರಡಿಸಿರುವ ಆದೇಶದ ಪ್ರಕಾರ ಒಮ್ಮೆ ಈ ತನಿಖಾ ಠಾಣೆಯಲ್ಲಿ ಕೆಲಸ ಮಾಡಿದ ಸಿಬ್ಬಂದಿ ವರ್ಗದವರನ್ನು ಮತ್ತೆ ಇದೇ ತನಿಖಾ ಠಾಣೆಗೆ ನಿಯೋಜನೆ ಮಾಡಿರುವುದು ಸರ್ಕಾರಿ ಆದೇಶದ ಸ್ಪಷ್ಟ ಉಲ್ಲಂಘನೆಯಾಗಿರುವುದು ನಿಜವಲ್ಲವೇ;

ಈ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಳ್ಳುವುದು;

ಉ) ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರು ಎದುರಿಸುತ್ತಿರುವ ಗಂಭೀರವಾದ ಆರೋಪಗಳ ವಿಚಾರಣೆ ಈಗ ಯಾವ ಹಂತದಲ್ಲಿದೆ;

ಊ) ಈ ತನಿಖಾ ಠಾಣೆಗೆ ಖಾಯಂ ಸಿಬ್ಬಂದಿ ವರ್ಗವನ್ನು ವರ್ಗಾವಣೆ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು?